ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ - ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 23/6/20

# ವಿಧಾನ ಪರಿಷತ್‌ಗೆ ಏಳು ಮಂದಿ ಅವಿರೋಧ ಆಯ್ಕೆ

## ಬಿಜೆಪಿಯ 3, ಕಾಂಗ್ರೆಸ್‌ನ 2, ಜೆಡಿಎಸ್‌ನ ಒಬ್ಬರು ಆಯ್ಕೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಿರೀಕ್ಷೆಯಂತೆ ವಿಧಾನಪರಿಷತ್‌ನ ಏಳು ಸ್ಥಾನಕ್ಕೆ ಅವಿರೋಧ ಆಯ್ಕೆಯಾಗಿದ್ದು, ಆಡಳಿತಾರೂಢ ಬಿಜೆಪಿಯ ನಾಲ್ವರು, ಕಾಂಗ್ರೆಸ್‌ನ ಇಬ್ಬರು ಮತ್ತು ಜೆಡಿಎಸ್‌ನ ಒಬ್ಬರು ಮೇಲ್ಮನೆ ಪ್ರವೇಶಿಸಿದ್ದಾರೆ.



ನಾಮಪತ್ರ ವಾಪಸ್ ಪಡೆಯಲು ಸೋಮವಾರ ಅಂತಿಮ ದಿನವಾಗಿತ್ತು. ಏಳು ಸ್ಥಾನಕ್ಕೆ ಏಳು ಅಭ್ಯರ್ಥಿಗಳು ಮಾತ್ರ ಕಣದಲ್ಲಿದ್ದರು. ಯಾರೊಬ್ಬರು ಹೆಚ್ಚುವರಿಯಾಗಿ ಕಣದಲ್ಲಿ ಇಲ್ಲದ ಕಾರಣ ವಿಧಾನಸಭೆಕಾರ್ಯದರ್ಶಿಮತ್ತುಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರು ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಪ್ರಕಟಿಸಿದರು.

ಬಿಜೆಪಿಯಿಂದ ಮಾಜಿ ಸಚಿವರಾದ ಎಂ.ಟಿ.ಬಿ. ನಾಗರಾಜ್, ಆರ್.ಶಂಕರ್, ಸುನೀಲ್ ವಲ್ಯಾಪುರೆ ಮತ್ತು ಪಕ್ಷದ ಮುಖಂಡ ಪ್ರತಾಪ್‌ಸಿಂಹ ನಾಯಕ್, ಕಾಂಗ್ರೆಸ್‌ನಿಂದ ಹಿರಿಯ ನಾಯಕರಾದ ಬಿ.ಕೆ.ಹರಿಪ್ರಸಾದ್, ನಸೀರ್ ಅಹಮ್ಮದ್ ಹಾಗೂ ಜೆಡಿಎಸ್‌ನಿಂದ ಪಕ್ಷದ ಕಾರ್ಯಕರ್ತ ಗೋವಿಂದರಾಜು ವಿಧಾನಪರಿಷತ್‌ಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಸೋಮವಾರ ಮಧ್ಯಾಹ್ನ ವಿಧಾನಸೌಧಕ್ಕೆ ಆಗಮಿಸಿದ ಅಭ್ಯರ್ಥಿಗಳು ಆಯ್ಕೆಯ ಪ್ರಮಾಣ ಪತ್ರವನ್ನು ಪಡೆದುಕೊಂಡರು.

ಪರಿಷತ್ ಚುನಾವಣೆಗೆ ಒಂಭತ್ತು ಅಭ್ಯರ್ಥಿಗಳು ನಾಮಪತ್ರಗಳು ಸಲ್ಲಿಸಿದ್ದರು. ಸೂಚಕರಿಲ್ಲದ ಹಿನ್ನೆಲೆಯಲ್ಲಿ ನಾಮಪತ್ರ ಸಲ್ಲಿಸಿದ ಇಬ್ಬರು ಅಭ್ಯರ್ಥಿಗಳನಾಮಪತ್ರ ಅಸಿಂಧುಗೊಳಿಸಲಾಯಿತು. ಹೀಗಾಗಿಏಳುಮಂದಿಅವಿರೋಧಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ವಿಶಾಲಾಕ್ಷಿ ಹೇಳಿದ್ದಾರೆ. ಇದೇ ತಿಂಗಳ 30ರಂದು ಪರಿಷತ್ ಸದಸ್ಯರ ಅವಧಿ ಮುಕ್ತಾಯವಾಗಲಿದೆ.